ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IVA | ಬೆಂಗಳೂರು, ಮಂಗಳವಾರ, ೧೦, ಸೆಪ್ಟೆಂಬರ್, ೨೦೨೪(ಭಾದ್ರಪದ, ೧೯, ಶಕವರ್ಷ, ೧೯೪೬)<br>BENGALURU, TUESDAY, 10, SEPTEMBER, 2024(BHADRAPADA, 19, SHAKAVARSHA, 1946) | ನಂ. ೪೩೬<br>No.436 |
|---|---|---|

## GOVERNMENT OF KARNATAKA

NO. DPAR 66 SCR 2022

Karnataka Government Secretariat,
Vidhana Soudha,
Bengaluru, dated: 10.09.2024

## NOTIFICATION

Whereas the draft of the following rules to further to amend the Karnataka Civil Services (Direct Recruitment) (General) Rules, 2021 was published as required by clause (a) of sub-section (2) of Section 3 read with Section 8 of the Karnataka State Civil services Act, 1978 (Karnataka Act 14 of 1990) in Notification No. DPAR 66 SCR 2022, dated: 20.09.2022 in Part IV-A of the Karnataka Gazette Extraordinary dated 20.09.2022 inviting objections and suggestions from all persons likely to be affected thereby within fifteen days from the date of publication of the draft in the Official Gazette.

Whereas, the said Gazette was made available to the public on 20.09.2022.

And whereas, the objections and suggestions received have been considered by the State Government.

Now, therefore, in exercise of the powers conferred by sub-section (1) of section 3 read with section 8 of the Karnataka State Civil Services Act, 1978 (Karnataka Act 14 of 1990), the Government of Karnataka hereby makes the following rules, namely:-

## RULES

**1. Title andCommencement.-**(1) These rules may be called the Karnataka Civil Services (Direct Recruitment) (General) (Second Amendment) Rules, 2024.

(2) They shall come into force from the date of their final publication in the Official Gazette.

**2. Amendment of rule 6.-** In the Karnataka Civil Services (Direct Recruitment) (General) Rules, 2021, in rule (6), in sub-rule (1),-

(1) for clause (a), the following shall be substituted, namely.-

"(a) In respect of Group-A and Group-B posts where there is no interview the examination shall be in the form of Objective Multiple Choice consisting of two written papers carrying 300 marks each. There shall be negative marking and one fourth of the marks allotted to the said questions shall be deducted for every wrong answer.

(b) In respect of Group-A posts, where there is interview, the examination shall be in the form of **Descriptive Type** consisting of two written papers carrying 300 marks each.

The examination for Group-A and Group-B posts shall consist of two papers with following syllabus, namely:-

**(i) Paper-I**.- General Paper:- Covering General Knowledge topics relating to Current Affairs, General Science, Karnataka History and Geography, Indian History and Geography, Social Sciences, General Mental Ability,Constitution of India, Public Administration and Rural Development, Science and Technology, Indian Economy, International Relations, Environment and Ecology,Reasoning Ability, Matters of every day observation and practical knowledge as may be expected of a person who has passed the prescribed qualifying examination.

**(ii) Paper-II**.- Specific Paper:- The content of this paper shall be determined by selection authority keeping in view the nature of the job for which the selection is being made and the qualifying examination is consultation with the Head of the field department or the Appointing Authority concerned."

(2) The existing clauses (b) and (c), shall be re-numbered as (c) and (d) respectively.

By Order and in the name of the
Governor of Karnataka,

(Veerabhadra)
Under Secretary to Government
Department of Personnel and
Administrative Reforms
(Service Rules-1).

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 66 ಸೇವನೆ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 10.09.2024.

**ಅಧಿಸೂಚನೆ**

ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ಇದನ್ನುಮತ್ತಷ್ಟು ತಿದ್ದುಪಡಿ ಮಾಡುವುದಕ್ಕೆ ದಿನಾಂಕ: 20.09.2022 ರ ಅಧಿಸೂಚನೆ ಸಂಖ್ಯೆ ಸಿಆಸುಇ 66 ಸೇವನೆ 2022 ರಲ್ಲಿ ಪ್ರಕಟಿಸಿರುವ ಈ ಮುಂದಿನ ನಿಯಮಗಳ ಕರಡನ್ನು ಅಧಿಕೃತ ರಾಜ್ಯಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಅದರಿಂದ ಬಾಧಿತರಾಗುವ ಸಂಭವವಿರುವ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆಗಳನ್ನು ಮತ್ತು ಸಲಹೆಗಳನ್ನು ಆಹ್ವಾನಿಸಿ ದಿನಾಂಕ: 20.09.2022 ರಂದು ಕರ್ನಾಟಕ ರಾಜ್ಯಪತ್ರದ ಭಾಗ IV-ಎ ರಲ್ಲಿ ಕರ್ನಾಟಕ ರಾಜ್ಯ ನಾಗರಿಕ ಸೇವಾ ಅಧಿನಿಯಮ, 1978 (1990 ರ ಕರ್ನಾಟಕ ಅಧಿನಿಯಮ 14)ರ 3ನೇ ಪ್ರಕರಣದ (2)ನೇ ಉಪ-ಪ್ರಕರಣದ (ಎ) ಖಂಡವನ್ನು ಪ್ರಕರಣದ 8 ರೊಂದಿಗೆ ಓದಿಕೊಂಡು ಅಗತ್ಯಪಡಿಸಲಾದಂತೆ ಪ್ರಕಟಿಸಲಾಗಿರುವುದರಿಂದ;

ಸದರಿ ರಾಜ್ಯಪತ್ರವನ್ನು ದಿನಾಂಕ: 20.09.2022 ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು ಸದರಿ ಕರಡು ಅಧಿಸೂಚನೆಯ ಬಗ್ಗೆ ಆಕ್ಷೇಪಣೆ ಮತ್ತು ಸಲಹೆಗಳು ಸ್ವೀಕೃತವಾಗಿದ್ದು ಅವುಗಳನ್ನು ರಾಜ್ಯ ಸರ್ಕಾರವು ಪರಿಶೀಲಿಸಿರುವುದರಿಂದ;

ಈಗ ಕರ್ನಾಟಕ ರಾಜ್ಯ ನಾಗರಿಕ ಸೇವಾ ಅಧಿನಿಯಮ, 1978 (1990 ರ ಕರ್ನಾಟಕ ಅಧಿನಿಯಮ 14) ರ 3ನೇ ಪ್ರಕರಣದ (1) ನೇ ಉಪ ಪ್ರಕರಣವನ್ನು 8ನೇ ಪ್ರಕರಣದೊಂದಿಗೆ ಓದಿಕೊಂಡಂತೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ನಿಯಮಗಳನ್ನು ರಚಿಸುತ್ತದೆ, ಎಂದರೆ:-

**ನಿಯಮಗಳು**

**1. ಶೀರ್ಷಿಕೆ ಮತ್ತು ಪ್ರಾರಂಭ.-** (1) ಈ ನಿಯಮಗಳನ್ನು ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) (2ನೇ ತಿದ್ದುಪಡಿ) ನಿಯಮಗಳು, 2024 ಎಂದು ಕರೆಯತಕ್ಕದ್ದು.

(2) ಇವು ಅಧಿಕೃತ ರಾಜ್ಯಪತ್ರದಲ್ಲಿ ಅಂತಿಮವಾಗಿ ಪ್ರಕಟಗೊಂಡ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. ನಿಯಮ 6 ರ ತಿದ್ದುಪಡಿ:-** ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು, 2021 ರ ನಿಯಮ 6 ರ ಉಪ ನಿಯಮ (1) ರಲ್ಲಿ,-

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



(1) ಖಂಡ (ಎ) ರ ಬದಲಿಗೆ ಈ ಕೆಳಕಂಡಂತೆ ಪ್ರತಿಸ್ಥಾಪಿಸತಕ್ಕದ್ದು.-

"(ಎ) ಸಂದರ್ಶನವಿಲ್ಲದ ಗ್ರೂಪ್-ಎ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ಸಂಬಂಧಿಸಿದಂತೆ ಸ್ಪರ್ಧಾತ್ಮಕ ಪರೀಕ್ಷೆಯು ತಲಾ 300 ಅಂಕಗಳ ಎರಡು ಲಿಖಿತ ಪ್ರಶ್ನೆ ಪತ್ರಿಕೆಗಳನ್ನು ಒಳಗೊಂಡಿದ್ದು, ವಸ್ತುನಿಷ್ಠ ಬಹು ಆಯ್ಕೆ ಸ್ವರೂಪದಲ್ಲಿ ಇರತಕ್ಕದ್ದು. ಪ್ರತಿಯೊಂದು ಪ್ರಶ್ನೆಯು ಋಣಾತ್ಮಕ ಅಂಕವನ್ನು ಒಳಗೊಂಡಿರತಕ್ಕದ್ದು ಮತ್ತು ಅಂಥ ಪ್ರಶ್ನೆಗಳಿಗೆ ಹಂಚಿಕೆ ಮಾಡಲಾದ ಅಂಕಗಳಲ್ಲಿ ನಾಲ್ಕನೇ ಒಂದು ಭಾಗದಷ್ಟು (1/4) ಅಂಕಗಳನ್ನು ಪ್ರತಿಯೊಂದು ತಪ್ಪಾದ ಉತ್ತರಕ್ಕೆ ಕಡಿತಗೊಳಿಸತಕ್ಕದ್ದು.

(ಬಿ) ಸಂದರ್ಶನವಿರುವ ಗ್ರೂಪ್-ಎ ಹುದ್ದೆಗಳಿಗೆ ಸಂಬಂಧಿಸಿದಂತೆ ಸ್ಪರ್ಧಾತ್ಮಕ ಪರೀಕ್ಷೆಯು ತಲಾ 300 ಅಂಕಗಳ ಎರಡು ಲಿಖಿತ ಪ್ರಶ್ನೆ ಪತ್ರಿಕೆಗಳನ್ನು ಒಳಗೊಂಡಿದ್ದು, 'ವಿವರಣಾತ್ಮಕ ಸ್ವರೂಪ'ದಲ್ಲಿರತಕ್ಕದ್ದು.

ಗ್ರೂಪ್-ಎ ಮತ್ತು ಗ್ರೂಪ್-ಬಿ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯ ಎರಡು ಪತ್ರಿಕೆಗಳಿಗೆ ಸಂಬಂಧಿಸಿದಂತೆ ಪಠ್ಯಕ್ರಮವು ಈ ಕೆಳಕಂಡಂತೆ ಇರತಕ್ಕದ್ದು,-

**(i) ಪತ್ರಿಕೆ-I.** ಸಾಮಾನ್ಯ ಪತ್ರಿಕೆ:-ಪ್ರಚಲಿತ ವಿದ್ಯಮಾನಗಳು, ಸಾಮಾನ್ಯ ವಿಜ್ಞಾನ, ಕರ್ನಾಟಕ ಇತಿಹಾಸ ಮತ್ತು ಭೂಗೋಳಶಾಸ್ತ್ರ, ಭಾರತದ ಇತಿಹಾಸ ಮತ್ತು ಭೂಗೋಳಶಾಸ್ತ್ರ, ಸಮಾಜ ವಿಜ್ಞಾನ, ಸಾಮಾನ್ಯ ಬೌದ್ಧಿಕ ಸಾಮರ್ಥ್ಯ, ಭಾರತದ ಸಂವಿಧಾನ, ಸಾರ್ವಜನಿಕ ಆಡಳಿತ ಮತ್ತು ಗ್ರಾಮೀಣಾಭಿವೃದ್ಧಿ, ವಿಜ್ಞಾನ ಮತ್ತು ತಂತ್ರಜ್ಞಾನ, ಭಾರತದ ಅರ್ಥವ್ಯವಸ್ಥೆ, ಅಂತರಾಷ್ಟ್ರೀಯ ಸಂಬಂಧಗಳು, ಪರಿಸರ ವಿಜ್ಞಾನ, ತಾರ್ಕಿಕ ಆಲೋಚನೆ, ದೈನಂದಿನ ಗ್ರಹಿಕೆಯ ವಿಷಯಗಳನ್ನು ಮತ್ತು ನಿಗದಿಪಡಿಸಲಾದ ಅರ್ಹತಾ ಪರೀಕ್ಷೆಯಲ್ಲಿ ಉತ್ತೀರ್ಣನಾಗಿರುವ ವ್ಯಕ್ತಿಯಿಂದ ನಿರೀಕ್ಷಿಸಬಹುದಾದ ಪ್ರಾಯೋಗಿಕ ಜ್ಞಾನವನ್ನು ಒಳಗೊಂಡಿರತಕ್ಕದ್ದು.

**(ii) ಪತ್ರಿಕೆ-II.** ನಿರ್ದಿಷ್ಟ ಪತ್ರಿಕೆ:- ಈ ಪತ್ರಿಕೆಯ ಪಠ್ಯಕ್ರಮವನ್ನು ಆಯ್ಕೆ ಪ್ರಾಧಿಕಾರವು ಯಾವ ಹುದ್ದೆಗೆ ಆಯ್ಕೆ ಮಾಡಲಾಗುತ್ತಿದೆಯೋ ಆ ಹುದ್ದೆಯ ಸ್ವರೂಪವನ್ನು ದೃಷ್ಟಿಯಲ್ಲಿಟ್ಟುಕೊಂಡು ಮತ್ತು ಸಂಬಂಧಪಟ್ಟ ಕ್ಷೇತ್ರ ಇಲಾಖೆ ಅಥವಾ ನೇಮಕಾತಿ ಪ್ರಾಧಿಕಾರದೊಂದಿಗೆ ಸಮಾಲೋಚಿಸಿ ನಿರ್ಧರಿಸತಕ್ಕದ್ದು."

(2) ಚಾಲ್ತಿಯಲ್ಲಿರುವ ಖಂಡ (ಬಿ) ಮತ್ತು (ಸಿ) ಗಳನ್ನು ಕ್ರಮವಾಗಿ (ಸಿ) ಮತ್ತು (ಡಿ) ಎಂದು ಮರುಸಂಖ್ಯೀಕರಣಗೊಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವೀರಭದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH